**ಕರ್ನಾಟಕ ಸರ್ಕಾರ**
(ವಾಣಿಜ್ಯ ತೆರಿಗೆಗಳ ಇಲಾಖೆ)

ಸಂ.:ವಾ.ತೆ.ಜಂ.ಆ(ಆ)/ವಿ.ಸ.ಸೇ.ತೆ.ಕ–4/2024–25

ವಾಣಿಜ್ಯ ತೆರಿಗೆಗಳ ಜಂಟಿ ಆಯುಕ್ತರು (ಆಡಳಿತ)
ವಿಭಾಗೀಯ ಸರಕು ಮತ್ತು ಸೇವಾ ತೆರಿಗೆ ಕಛೇರಿ–4,
6ನೇ ಮಹಡಿ, ಟಿಟಿಎಂಸಿ ಬಿಎಂಟಿಸಿ ಕಟ್ಟಡ,
ಕೋರಮಂಗಲ, ಬೆಂಗಳೂರು, ದಿನಾಂಕ:10.03.2025.
ಮಿಂಚಂಚೆ: jcctdgsto4.bng@ctd.ka.gov.in
ದೂರವಾಣಿ:080-25704833.

**ಟೆಂಡರ್‌ನ ಅಧಿಸೂಚನೆ**

**ವಿಷಯ: ದಿನಾಂಕ: 01.04.2025 ರಿಂದ ದಿನಾಂಕ: 31.03.2026ರ** ಅವಧಿಗೆ ವಾಣಿಜ್ಯ ತೆರಿಗೆಗಳ ಜಂಟಿ ಆಯುಕ್ತರು(ಆಡಳಿತ), ವಿ.ಸ.&ಸೇ.ತೆ.ಕ–4 ಬೆಂಗಳೂರು, ಈ ಕಛೇರಿಗೆ ಸಾಮಾನ್ಯ ಟೆಂಡರ್ ಪ್ರಕ್ರಿಯೆ ಮುಖೇನ ಖಾಸಗಿ ವಾಹನಗಳನ್ನು ಬಾಡಿಗೆಗೆ ಪಡೆದುಕೊಳ್ಳುವ ಬಗ್ಗೆ.

**ಉಲ್ಲೇಖ:** 01. ಮಾನ್ಯ ವಾಣಿಜ್ಯ ತೆರಿಗೆ ಆಯುಕ್ತರವರ ಸುತ್ತೋಲೆ ಸಂಖ್ಯೆ: ವಿಹೆಚ್‌ಟಿ/ಸಿಆರ್–22/2019–20, ದಿನಾಂಕ: 27.04.2022.
02. ಮಾನ್ಯ ವಾಣಿಜ್ಯ ತೆರಿಗೆ ಆಯುಕ್ತರವರ ಪತ್ರ ಸಂಖ್ಯೆ: ವಿಹೆಚ್‌ಟಿ/ಸಿಆರ್–11/2024–25, ಟಿ.ಸಂ.:4289 ದಿನಾಂಕ: 15.02.2025 & 07.03.2025.

********

ವಾಣಿಜ್ಯ ತೆರಿಗೆಗಳ ಜಂಟಿ ಆಯುಕ್ತರು(ಆಡಳಿತ), ವಿ.ಸ.&ಸೇ.ತೆ.ಕ–4, ಬೆಂಗಳೂರು ಇವರ ಕಛೇರಿಯ ಉಪಯೋಗಕ್ಕಾಗಿ 16 (ಹದಿನಾರು) ಸಂಖ್ಯೆ ಮಾಲೀಕರೇ ಚಾಲಕರಾಗಿರುವ ಖಾಸಗಿ ವಾಹನಗಳನ್ನು ಮಾಸಿಕ ಬಾಡಿಗೆ ಆಧಾರದ ಮೇಲೆ ಪಡೆಯುವ ಬಗ್ಗೆ ಉಲ್ಲೇಖ(2)ರ ಪತ್ರದಲ್ಲಿ ಆದೇಶಿಸಿರುತ್ತಾರೆ. ಇದರನ್ವಯ ಮಾಲೀಕರೇ ಚಾಲಕರಾಗಿರುವ ಅರ್ಜಿಗಳನ್ನು ಮಾತ್ರ ಆಹ್ವಾನಿಸಲಾಗಿದ್ದು, ಆಸಕ್ತವುಳ್ಳ ಒಬ್ಬ ವಾಹನ ಮಾಲೀಕ/ಚಾಲಕ ಒಂದು ವಾಹನ ಸೇವೆಗೆ ಮಾತ್ರ ಅರ್ಜಿಯನ್ನು ಸಲ್ಲಿಸಬೇಕೆಂದು ತಿಳಿಸಲಾಗಿದೆ. ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 30 ಶಿವಾನಿ 2019, ದಿನಾಂಕ: 31.03.2022 ರಲ್ಲಿ ತಿಳಿಸಿರುವ ನಿಯಮಗಳನ್ವಯ ಮಾಲೀಕರೇ ಚಾಲಕರಾಗಿರುವ ಖಾಸಗಿ ವಾಹನಗಳ ಸೇವೆಯನ್ನು ಪಡೆಯಲಾಗುವುದು.

1. ಆರ್ಥಿಕ ಇಲಾಖೆಯ ಹಿಂಬರಹ ಸಂಖ್ಯೆ ಆಇ 156 ವೆಚ್ಚ – 12/2019, ದಿನಾಂಕ: 22.03.2022ರ ಅನ್ವಯ ವಾಹನಗಳಿಗೆ ಬಾಡಿಗೆ ಮೊತ್ತ ತಿಂಗಳಿಗೆ ರೂ. 35,000/–(ಹವಾನಿಯಂತ್ರಣ ರಹಿತ ವಾಹನಗಳು) ನೀಡಲಾಗುವುದು.
2. ವಾಹನದ ಮಾದರಿಯು **2018** ಮತ್ತು ನಂತರದಾಗಿರತಕ್ಕದ್ದು, ಪ್ರತಿ ವಾಹನದ ಗುಣಮಟ್ಟವನ್ನು ಹಾಗೂ ಚಾಲಕರ ಚಾಲನ ಕೌಶಲ್ಯವನ್ನು ಪರಿಶೀಲಿಸಿ ನಂತರವೇ ವಾಹನಗಳನ್ನು ತೆಗೆದುಕೊಳ್ಳಲಾಗುದು.
3. ಗುತ್ತಿಗೆಯ ಅವಧಿ ದಿನಾಂಕ: **01–04–2025 ರಿಂದ 31–03–2026** ರವರೆಗೆ.

ಅರ್ಜಿಗಳನ್ನು ಸಲ್ಲಿಸಲು ಕೊನೆಯ **ದಿನಾಂಕ: 19.03.2025 ಸಂಜೆ 05.00** ಗಂಟೆಯವರೆಗೆ, ಆ ನಂತರ ಸಲ್ಲಿಸಿದ ಅರ್ಜಿಗಳನ್ನು ಪುರಸ್ಕರಿಸಲಾಗುವುದಿಲ್ಲ.

ಅರ್ಹಗೊಂಡ ಮಾಲೀಕರೇ ಚಾಲಕರಾಗಿರುವ ವಾಹನ ಮಾಲೀಕ/ಚಾಲಕರ ವಿವರವನ್ನು ನಿಗಧಿತ ಅವಧಿಯಲ್ಲಿ ಇಲಾಖೆಯ ಸೂಚನಾ ಫಲಕ ಮತ್ತು ಇಲಾಖೆಯ ಅಂತರ್ಜಾಲದಲ್ಲಿ ಪ್ರಕಟಿಸಲಾಗುವುದು.

## ಅರ್ಜಿಯೊಂದಿಗೆ ಸಲ್ಲಿಸಬೇಕಾದ ದಾಖಲಾತಿಗಳು/ವಿವರಗಳು:

| | |
|---|---|
| 1 | ಅರ್ಜಿದಾರರ ಹೆಸರು, ವಿಳಾಸ ಹಾಗೂ ಇತ್ತೀಚಿನ ಪಾಸ್‌ಪೋರ್ಟ್ ಅಳತೆಯ ಭಾವಚಿತ್ರಗಳು-2. |
| 2 | ವಿಳಾಸದ ದಾಖಲೆ (ಮತದಾರರ ಗುರುತಿನ ಚೀಟಿ/ರೇಷನ್ ಕಾರ್ಡ್/ಆಧಾರ್ ಕಾರ್ಡ್/ಪಾಸ್ ಪೋರ್ಟ್ ಅಥವಾ ಇತರೆ ಭಾವಚಿತ್ರ ಹೊಂದಿರುವ ಗುರುತಿನ ಚೀಟಿ) ಹಾಗೂ ಖಾಯಂ ವಿಳಾಸದ ದಾಖಲೆ, ಬ್ಯಾಂಕ್ ಖಾತೆಯ ವಿವರಗಳು/ಚೆಕ್ಕಿನ ಪ್ರತಿ. |
| 3 | ವಾಹನದ ನೊಂದಣಿ ಪುಸ್ತಕದ ಪ್ರತಿ - ಪ್ರಮಾಣ ಪತ್ರ |
| 4 | ಪ್ರಾದೇಶಿಕ ಸಾರಿಗೆ ಅಧಿಕಾರಿಗಳು ನೀಡಿರುವ ವಾಹನದ ವಿಮಾ ಪಾಲಿಸಿಯ ಪ್ರತಿ. |
| 5 | ಪ್ರಾದೇಶಿಕ ಸಾರಿಗೆ ಅಧಿಕಾರಿಗಳು ನೀಡಿರುವ ವಾಹನ ಚಾಲನಾ ಪರವಾನಗಿ ಪ್ರತಿ. |
| 6 | ರಸ್ತೆ ತೆರಿಗೆ ಪಾವತಿಸಿರುವ ವಿವರ ಹಾಗೂ ವಾಯುಮಾಲಿನ್ಯ ರಹಿತ ವಾಹನ ಎಂಬ ಪ್ರಮಾಣ ಪತ್ರ. |
| 7 | ಮಾಲೀಕರಿಗೆ ಸಂಬಂಧಿಸಿದಂತೆ ಡ್ರೈವಿಂಗ್ ಲೈಸನ್ಸ್ ಮತ್ತು ಚಾಲಕರ ದೈಹಿಕ ಸಾಮರ್ಥ್ಯ ಪ್ರಮಾಣ ಪತ್ರ, |
| 8 | ಪಾನ್ ಕಾರ್ಡ್ ಮತ್ತು ಆಧಾರ್ ಕಾರ್ಡ್ ನಮೂದಿಸತಕ್ಕದ್ದು. |
| 9 | ಪೋಲಿಸ್ ಪರಿಶೀಲನಾ ಪತ್ರ. |
| 10 | ಮೇಲ್ಕಂಡ ವಿವರಗಳು ಹಾಗೂ ಎಲ್ಲಾ ದಾಖಲಾತಿಗಳ ಪ್ರತಿಗಳನ್ನು ಸೀಲು ಮಾಡಿದ ಲಕೋಟೆಯಲ್ಲಿಟ್ಟು, ಲಕೋಟೆಯ ಮೇಲೆ ದಪ್ಪ ಅಕ್ಷರದಲ್ಲಿ **ಖಾಸಗಿ ವಾಹನ ಚಾಲಕರ/ಮಾಲೀಕರ ಹೊರಗುತ್ತಿಗೆ ಸೇವೆ ಸಲ್ಲಿಸಲು ಅರ್ಜಿ** ಎಂದು ನಮೂದಿಸುವುದು. |
| 11 | ಅಪೂರ್ಣ ವಿವರಗಳು ಹಾಗೂ ಮೇಲ್ಕಂಡ ದಾಖಲಾತಿಗಳನ್ನು ಸಲ್ಲಿಸದೇ ಇದ್ದ ಪಕ್ಷದಲ್ಲಿ ಅಂತಹ ಅರ್ಜಿಗಳನ್ನು ತಿರಸ್ಕರಿಸಲಾಗುವುದು. |
| 12 | ಅರ್ಜಿಗಳನ್ನು ಖುದ್ದಾಗಿ ವಾಣಿಜ್ಯ ತೆರಿಗೆಗಳ ಜಂಟಿ ಆಯುಕ್ತರು(ಆಡಳಿತ), ವಿಭಾಗೀಯ ಸರಕು ಮತ್ತು ಸೇವಾ ತೆರಿಗೆ ಕಛೇರಿ-4, ಟಿ.ಟಿ.ಎಂ.ಸಿ, ಬಿ.ಎಂ.ಟಿ.ಸಿ. ಕಟ್ಟಡ, 6ನೇ ಮಹಡಿ, ಕೋರಮಂಗಲ, ಬೆಂಗಳೂರು, ಕಛೇರಿಯಲ್ಲಿ ಸಲ್ಲಿಸುವುದು. |
| 13 | ಅರ್ಜಿಗಳನ್ನು ಸಲ್ಲಿಸಿರುವುದಕ್ಕೆ ಸ್ವೀಕೃತಿ ಪಡೆಯುವುದು ಹಾಗೂ ಕಾರ್ಯ ನಿರ್ವಹಣೆಯಲ್ಲಿ ಪಾಲಿಸಬೇಕಾದ ನಿಯಮಗಳು/ಷರತ್ತುಗಳ ವಿವರಗಳ ಪಟ್ಟಿ ಅನ್ವಯ ಖಡ್ಡಾಯವಾಗಿ ನಿಯಮಗಳನ್ನು ಅರ್ಹಗೊಳ್ಳುವ ವಾಹನ ಮಾಲೀಕ/ಚಾಲಕರು ಖಡ್ಡಾಯವಾಗಿ ಪಾಲಿಸತಕ್ಕದ್ದು. |
| 14 | ಯಾವುದೇ ಕಾರಣವನ್ನು ನೀಡದೆ ಅರ್ಜಿಯನ್ನು ತಿರಸ್ಕರಿಸುವ ಹಕ್ಕನ್ನು ವಾಣಿಜ್ಯ ತೆರಿಗೆಗಳ ಜಂಟಿ ಆಯುಕ್ತರು(ಆಡಳಿತ), ವಿಭಾಗೀಯ ಸರಕು ಮತ್ತು ಸೇವಾ ತೆರಿಗೆ ಕಛೇರಿ-4, ಬೆಂಗಳೂರು ರವರಿಗೆ ಕಾಯ್ದಿರಿಸಲಾಗಿದೆ. |
| 15 | ಅರ್ಹಗೊಂಡ ಅರ್ಜಿದಾರರ ವಿವರಗಳ ಪಟ್ಟಿಯ ಪ್ರಕಟಣೆಯನ್ನು ಸೂಚನಾ ಫಲಕದಲ್ಲಿ ಪ್ರಕಟಿಸಲಾಗುವುದು. |

## ಟೆಂಡರ್‌ನ ಷರತ್ತು ಮತ್ತು ನಿಬಂಧನೆಗಳು:

| | |
|---|---|
| 01 | ಅನಾರೋಗ್ಯವೂ ಸೇರಿದಂತೆ ಅನಿವಾರ್ಯ ಸಂದರ್ಭಗಳಲ್ಲಿ ಮಾತ್ರ ಒಂದು ತಿಂಗಳಲ್ಲಿ ಎರಡು ದಿನ ಮಾತ್ರ ವಾಹನ ಉಪಯೋಗಿಸುವ ಕಛೇರಿಯ ಅಧಿಕಾರಿಯವರಿಂದ ಅನುಮತಿ ಪಡೆದು, ಮಾಲೀಕ-ಚಾಲಕರು ರಜೆ ಪಡೆಯಬಹುದು. ಆ ಅವಧಿಯಲ್ಲಿ ಬದಲಿ ವಾಹನದ ವ್ಯವಸ್ಥೆ ಕಡ್ಡಾಯವಾಗಿ ಮಾಡಲೇಬೇಕು. ಇಲ್ಲದಿದ್ದರೆ ಗೈರುಹಾಜರಿ ದಿವಸದ ಬಾಡಿಗೆ ಕಡಿತಗೊಳಿಸಲಾಗುವುದು. |
| 02 | ಮಾಸಿಕ ಬಾಡಿಗೆ ಆಧಾರದ ಮೇಲೆ ಹಾಗೂ ಕರಾರಿನಂತೆ ದರಗಳಿಗೆ ಒಳಪಟ್ಟು ಮಾತ್ರ ವಾಹನಗಳನ್ನು ಗುತ್ತಿಗೆ ಆಧಾರದ ಮೇಲೆ ಬಾಡಿಗೆಗೆ ಪಡೆಯಲಾಗುತ್ತದೆ. |
| 03 | ಮಾಲೀಕ-ಚಾಲಕರು ಕಟ್ಟುನಿಟ್ಟಾಗಿ ಸಮಯಪಾಲನೆ ಮಾಡತಕ್ಕದ್ದು, ಕರ್ತವ್ಯದ ಸಮಯದಲ್ಲಿ ಕಡ್ಡಾಯವಾಗಿ ಸಮವಸ್ತ್ರವನ್ನು ಧರಿಸಬೇಕು. ವಾಹನ ಉಪಯೋಗಿಸುವ ಕಛೇರಿಯ ಮುಖ್ಯಸ್ಥರಿಂದ ಈ ಕುರಿತು ದೂರುಗಳು ಬಂದಲ್ಲಿ ಅಂತಹ ವಾಹನದ ಬಳಕೆಯನ್ನು ನಿಲ್ಲಿಸುವ, ಒಪ್ಪಂದವನ್ನು ರದ್ದುಪಡಿಸುವ ಅಧಿಕಾರ ವಾಣಿಜ್ಯ ತೆರಿಗೆಗಳ ಜಂಟಿ ಆಯುಕ್ತರು(ಆಡಳಿತ), ವಿಸ&ಸೇತೆಕ-4, ಬೆಂಗಳೂರು ರವರದ್ದಾಗಿರುತ್ತದೆ. |
| 04 | ಇಲಾಖೆಯ ಈ ವಿಭಾಗದ ಪ್ರತಿ ಕಛೇರಿಯಲ್ಲಿ ಉಪಯೋಗಿಸುವ ಪ್ರತಿ ವಾಹನಕ್ಕೆ ಸಂಬಂಧಿಸಿದಂತೆ ನಿಗದಿತ ಲಾಗ್ ಪುಸ್ತಕವನ್ನು ನಿರ್ವಹಿಸಿ ಪ್ರತಿ ದಿನದ ಆರಂಭ ಮತ್ತು ಅಂತ್ಯದವರೆಗಿನ ವಾಹನ ಓಡಾಟದ ಸಂಬಂಧ ಈ ಪುಸ್ತಕದಲ್ಲಿ ಅಗತ್ಯ ದಾಖಲೆಗಳನ್ನು ನಮೂದಿಸಿ ವಾಹನವನ್ನು ಉಪಯೋಗಿಸಿದ ಅಧಿಕಾರಿಯವರಿಂದ ರುಜು ಪಡೆಯತಕ್ಕದ್ದು. |
| 05 | ಈ ವಿಭಾಗದ ಪ್ರತಿ ಕಛೇರಿಯಲ್ಲಿ ಉಪಯೋಗಿಸುವ ವಾಹನ ಓಡಾಟಕ್ಕೆ ಸಂಬಂಧಿಸಿದಂತೆ ಆಯಾ ದಿನದ ಆರಂಭಿಕ ಮತ್ತು ಅಂತಿಮ ಸಮಯದ ಗಣನೆ ಮತ್ತು ಕಿಲೋಮೀಟರ್‌ನ ಗಣನೆಯು ಆಯಾ ಕಛೇರಿಯ ಆವರಣದಿಂದ ಕಛೇರಿ ಕಾರ್ಯದ ನಿಮಿತ್ತ ಆ ವಾಹನ ಹೊರಡುವ ಕ್ಷಣದಿಂದ ಪ್ರಾರಂಭವಾಗುತ್ತದೆ ಹಾಗೂ ಆ ದಿನದ ಕಾರ್ಯ ಮುಗಿದ ಮೇಲೆ ಅದೇ ಸ್ಥಳದಲ್ಲಿ ಕೊನೆಗೊಳ್ಳುತ್ತದೆ. |
| 06 | ಯಾವುದೇ ತಿಂಗಳಿನ ವಾಹನ ಬಾಡಿಗೆ ಹಣವನ್ನು ಅದರ ಮುಂದಿನ ತಿಂಗಳು ವಾಹನ ಮಾಲೀಕರು ಸಲ್ಲಿಸುವ ಬಿಲ್ಲಿನ ಆಧಾರದ ಮೇಲೆ ಪಾವತಿಸಲಾಗುವುದು. ಇಲಾಖೆಗೆ ಬಾಡಿಗೆ ಹಣದ ಬಿಲ್ಲನ್ನು ಸಂಬಂಧಿಸಿದ ವಾಹನದ ಲಾಗ್ ಪುಸ್ತಕದ ಕಛೇರಿ ಮುಖ್ಯಸ್ಥರಿಂದ ದೃಢೀಕೃತವಾದ ನಕಲು ಪ್ರತಿ ಮತ್ತು ವಾಹನ ಉಪಯೋಗಿಸಿದ ಕಛೇರಿಯ ಮುಖ್ಯಸ್ಥರ ಸೂಕ್ತ ಪ್ರಮಾಣಪತ್ರದ ಜೊತೆ ಪ್ರತಿ ತಿಂಗಳ 5ನೇ ತಾರೀಖಿನೊಳಗೆ ಸಲ್ಲಿಸತಕ್ಕದ್ದು. |

| | |
|---|---|
| 07 | ವಾಹನಗಳನ್ನು ಬಾಡಿಗೆ ಆಧಾರದ ಮೇಲೆ ಈ ಇಲಾಖೆಗೆ ಒದಗಿಸುವ ಕಾಲಮಿತಿಯು ಆರಂಭದಲ್ಲಿ ದಿನಾಂಕ: 01-04-2025 ರಿಂದ 31-03-2026 ರವರೆಗೆ ಇರುತ್ತದೆ. ಅಗತ್ಯವಿದ್ದರೆ ಈ ಟೆಂಡರ್‌ನಲ್ಲಿ ನಿಗಧಿಪಡಿಸಿರುವ ಷರತ್ತು ಮತ್ತು ನಿಬಂಧನೆಗಳಿಗೆ ಒಳಪಟ್ಟು ಅಥವಾ ಇನ್ನೂ ಹೆಚ್ಚಿನ ಷರತ್ತುಗಳ ಜೊತೆಗೆ ಮತ್ತೊಂದು ವರ್ಷದ ಅಥವಾ ಒಂದು ತ್ರೈಮಾಸಿಕದ ಅವಧಿಗೆ ವಾಹನ ಮಾಲೀಕರು ಮತ್ತು ಈ ಇಲಾಖೆಯ ಆಯುಕ್ತರ ಲಿಖಿತ ಇಚ್ಛೆಯ ಮೇರೆಗೆ ಮುಂದುವರಿಸಬಹುದಾಗಿದೆ. ಅಲ್ಲದೆ ಅವಧಿಗೆ ಮುನ್ನಾ ಮೇಲ್ಕಂಡ ಕರಾರನ್ನು ರದ್ದುಗೊಳಿಸುವ ಹಕ್ಕು ವಾಣಿಜ್ಯ ತೆರಿಗೆಗಳ ಆಯುಕ್ತರಿಗೆ/ವಾಣಿಜ್ಯ ತೆರಿಗೆಗಳ ಜಂಟಿ ಆಯುಕ್ತರು (ಆಡಳಿತ), ವಿಸ&ಸೇತೆಕ-4, ಬೆಂಗಳೂರು ರವರದ್ದಾಗಿರುತ್ತದೆ. |
| 08 | ವಾಹನವನ್ನು ಸರಕಾರಿ ಕೆಲಸಕ್ಕೆ ಉಪಯೋಗಿಸುವಾಗ "ಸರಕಾರಿ ಕೆಲಸದ ಮೇಲೆ" ಅಥವಾ "ಕರ್ನಾಟಕ ಸರ್ಕಾರದ ಸೇವೆಯಲ್ಲಿ" ಎಂಬ ಫಲಕವಿರಬೇಕು. ಪಾರ್ಕಿಂಗ್ ಶುಲ್ಕ ಇತ್ಯಾದಿ ವಾಹನ ಮಾಲೀಕರೇ ಭರಿಸತಕ್ಕದ್ದು. |
| 09 | ವಾಹನಕ್ಕೆ ಸಂಬಂಧಿಸಿದ ಯಾವುದೇ ಕಾನೂನು ಉಲ್ಲಂಘನೆಗೆ ಸ್ವತ: ಮಾಲೀಕರೇ/ಚಾಲಕರೇ/ಟ್ರಾವಲ್ ಏಜನ್ಸೀಸ್/ಸಂಸ್ಥೆಯವರೇ ಜವಾಬ್ದಾರರಾಗಿರುತ್ತಾರೆ. |
| 10 | ವಾಹನವನ್ನು ಕಛೇರಿಯ ಕೆಲಸಕ್ಕೆ ಉಪಯೋಗಿಸಿದ ನಂತರ ಸಂಬಂಧಪಟ್ಟ ಅಧಿಕಾರಿಗಳಿಂದ ಕಾಲಕಾಲಕ್ಕೆ ಸರಿಯಾಗಿ ಉಪಯೋಗಿಸಿದ ವಿವರದೊಂದಿಗೆ ಟ್ರಿಪ್ ಶೀಟ್‌ನಲ್ಲಿ ಭರ್ತಿ ಮಾಡಿ ಸಹಿ ಮಾಡುವುದು. |
| 11 | ಈ ಇಲಾಖೆಗೆ ಹೊರಗುತ್ತಿಗೆ ಆಧಾರದ ಮೇಲೆ ವಾಹನವನ್ನು ಪಡೆದಿರುವಂತಹ ಅವಧಿಯಲ್ಲಿ ಬೇರೆ ಯಾವುದೇ ಇಲಾಖೆಯಲ್ಲಿ ಅಥವಾ ಖಾಸಗಿ ಸಂಸ್ಥೆಯಲ್ಲಿ ಅಥವಾ ಬೇರೆ ಇನ್ಯಾವುದೇ ಕೆಲಸಗಳಿಗೆ ವಾಹನವನ್ನು ಉಪಯೋಗಿಸುವಂತಿಲ್ಲ ಹಾಗೂ ವಾಹನವನ್ನು ಪೂರ್ಣವಾಗಿ "ವಾಣಿಜ್ಯ ತೆರಿಗೆ ಇಲಾಖಾ ಸೇವೆಗಾಗಿ" ಮೀಸಲಿಡತಕ್ಕದ್ದು. |
| 12 | ರಜಾ ದಿನಗಳಲ್ಲಿ ಕಚೇರಿ ಕರ್ತವ್ಯ ನಿರ್ವಹಿಸುವ ಸಂದರ್ಭ ಬಂದಲ್ಲಿ ಮಾಲೀಕ/ಚಾಲಕರು ಯಾವುದೇ ಕಾರಣ ನೀಡದೇ ಕೆಲಸ ನಿರ್ವಹಿಸತಕ್ಕದ್ದು, ಒಂದು ವೇಳೆ ರಜಾ ದಿನಗಳಲ್ಲಿ ಕೇಂದ್ರ ಸ್ಥಳ ಬಿಡುವ ಸಂದರ್ಭ ಬಂದಲ್ಲಿ ಜಂಟಿ ಆಯುಕ್ತರ ಪೂರ್ವಾನುಮತಿ ಪಡೆಯ ತಕ್ಕದ್ದು. |
| 13 | ಈ ಭಾಗದ ಅಧಿಕಾರಿಗಳು ರಜೆ/ಅನ್ಯ ಸೇವೆ/ಇನ್ಯಾವುದೇ ಕಛೇರಿ ಕಾರ್ಯ ನಿಮಿತ್ತ ಕಛೇರಿಯಿಂದ ಹೊರಗೆ ತೆರಳಿದ ಸಂದರ್ಭದಲ್ಲಿ ಅವರಿಗೆ ಸಂಬಂಧಿಸಿದ ವಾಹನ ಚಾಲಕರು ಆ ದಿನ ಪೂರ್ವಾಹ್ನ 10-00 ಗಂಟೆಗೆ ಕಡ್ಡಾಯವಾಗಿ ವಾಣಿಜ್ಯ ತೆರಿಗೆಗಳ ಸಹಾಯಕ ಆಯುಕ್ತರು (ಕೇಂದ್ರ ಕಛೇರಿ), ರವರ ಬಳಿ ವರದಿ ಮಾಡಿಕೊಂಡು ಕಛೇರಿ ಆವರಣದಲ್ಲಿಯೇ ವಾಹನದೊಂದಿಗೆ ಇರತಕ್ಕದ್ದು. ಇಲ್ಲದಿದ್ದ ಪಕ್ಷದಲ್ಲಿ ಗೈರು ಹಾಜರು ಎಂದು ಪರಿಗಣಿಸಿ ಆ ದಿನದ ಸಂಭಾವನೆಯನ್ನು ಕಡಿತಗೊಳಿಸಲಾಗುವುದು. |
| 14 | ಖಾಸಗಿ ವಾಹನ ಮಾಲೀಕರು/ಚಾಲಕರು ಮಾಸಿಕ ಬಾಡಿಗೆಗೆ ಸಂಬಂಧಿಸಿದಂತೆ ಈ ಕಛೇರಿಗೆ ಬಿಲ್ಲುಗಳನ್ನು ಸಲ್ಲಿಸುವಾಗ ಮಾಹೆಯಲ್ಲಿ ಕರ್ತವ್ಯಕ್ಕೆ ಹಾಜರಾದ ದಿನಗಳು, ಒಟ್ಟು ಓಡಿಸಿದ ಕಿಲೋಮೀಟರ್ ಮತ್ತು ಸಮಯಕ್ಕೆ ಸಂಬಂಧಿಸಿದಂತೆ ಧೃಡೀಕೃತ ಪ್ರಮಾಣ ಪತ್ರವನ್ನು ಅಧಿಕಾರಿಗಳಿಂದ ಪಡೆದು ಬಿಲ್ಲಿನ ಜೊತೆ ಸಲ್ಲಿಸುವುದು. |
| 15 | ಮೇಲಿನ ಷರತ್ತು ಮತ್ತು ನಿಬಂಧನೆಗಳನ್ನು ಪಾಲಿಸದಿರುವುದು ಮತ್ತು ನಿರ್ಲಕ್ಷಿಸಿರುವುದು ಕಂಡುಬಂದಲ್ಲಿ ಯಾವುದೇ ಸೂಚನೆ ನೀಡದೆ ಹೊರಗುತ್ತಿಗೆ ಆಧಾರದ ಕರಾರನ್ನು ರದ್ದುಪಡಿಸಲಾಗುವುದು. |
| 16 | ಏಜನ್ಸಿ/ಸಂಸ್ಥೆಯು ಚಾಲಕರಿಗೆ ಪ್ರತಿ ತಿಂಗಳು ನೀಡಬೇಕಾದ ಕನಿಷ್ಠ ವೇತನ ಮತ್ತು ಇತರೆ ಹಣಕಾಸಿನ ಹೊಣೆಗಾರಿಕೆಗೆ ಬದ್ಧವಾಗಿರತಕ್ಕದ್ದು ಮತ್ತು ಚಾಲಕರಿಗೆ ನೀಡಬೇಕಾದ ಇ.ಎಸ್.ಐ. ಹಾಗೂ ಇ.ಪಿ.ಎಫ್‌ಗಳನ್ನು ಸಂಸ್ಥೆಯಿಂದ ಪಾವತಿಸಿದ ಬಗ್ಗೆ ಚಲನ್‌ಗಳನ್ನು ಪ್ರತಿ ತಿಂಗಳ ಮೊದಲ ವಾರದಲ್ಲಿ ಕಛೇರಿಗೆ ಸಲ್ಲಿಸತಕ್ಕದ್ದು. |
| 17 | ವಾಹನ ಚಾಲಕರು ಒಂದು ವೇಳೆ ಕರಾರು ಒಪ್ಪಂದವನ್ನು ರದ್ದುಪಡಿಸಬೇಕಾದರೆ, ಒಂದು ತಿಂಗಳು ಮುಂಚಿತವಾಗಿ ಈ ಕಛೇರಿಗೆ ಲಿಖಿತ ಮೂಲಕ ತಿಳಿಸಬೇಕು. ತಪ್ಪಿದ್ದಲ್ಲಿ ಒಂದು ತಿಂಗಳ ವಾಹನದ ಬಾಡಿಗೆ ಮೊತ್ತವನ್ನು ನೀಡಲಾಗುವುದಿಲ್ಲ |
| 18 | ಯಾವುದೇ ಸೂಚನೆ ನೀಡದೆ ಟೆಂಡರ್ ಅನ್ನು ಪಡೆಯುವ ಮತ್ತು ತಿರಸ್ಕರಿಸುವ ಹಕ್ಕು ವಾಣಿಜ್ಯ ತೆರಿಗೆ ಆಯುಕ್ತರು/ವಾಣಿಜ್ಯ ತೆರಿಗೆ ಜಂಟಿ ಆಯುಕ್ತರಿಗೆ ಇರುತ್ತದೆ. |
| 19 | ಮೇಲ್ಕಂಡ ಷರತ್ತುಗಳಲ್ಲದೇ ಕಛೇರಿ ಕರ್ತವ್ಯದ ಸುಗಮ ಕಾರ್ಯ ನಿರ್ವಹಣೆಗಾಗಿ ಇತರೆ ಯಾವುದೇ ಷರತ್ತುಗಳನ್ನು ವಿಧಿಸುವ ಅಧಿಕಾರವನ್ನು ವಾಣಿಜ್ಯ ತೆರಿಗೆಗಳ ಜಂಟಿ ಆಯುಕ್ತರು(ಆಡಳಿತ), ವಿಸ&ಸೇತೆಕ-4, ಬೆಂಗಳೂರು ರವರು ಹೊಂದಿರುತ್ತಾರೆ. |

ವಾಣಿಜ್ಯ ತೆರಿಗೆಗಳ ಜಂಟಿ ಆಯುಕ್ತರು(ಆಡಳಿತ),
ವಿಸ&ಸೇತೆಕ-4, ಬೆಂಗಳೂರು.

**ವಾಣಿಜ್ಯ ತೆರಿಗೆ ಜಂಟಿ ಆಯುಕ್ತರು (ಆಡಳಿತ)**
**ವಿಭಾಗೀಯ ಸರಕು & ಸೇವಾ ತೆರಿಗೆ ಕಛೇರಿ-04,**
**ಬಿ.ಎಂ.ಟಿ.ಸಿ. ಕಟ್ಟಡ, 6ನೇ ಮಹಡಿ,**
**ಕೋರಮಂಗಲ, ಬೆಂಗಳೂರು - 95**

ಪ್ರತಿಗಳನ್ನು :-

1. ಮಾನ್ಯ ವಾಣಿಜ್ಯ ತೆರಿಗೆಗಳ ಆಯುಕ್ತರು (ಕರ್ನಾಟಕ), ಬೆಂಗಳೂರು ಇವರಿಗೆ ಮಾಹಿತಿಗಾಗಿ ಗೌರವಪೂರ್ವಕವಾಗಿ ಸಲ್ಲಿಸಲಾಗಿದೆ.
2. ವಾಣಿಜ್ಯ ತೆರಿಗೆಗಳ ಜಂಟಿ ಆಯುಕ್ತರು(ಆಡಳಿತ), ವಿ.ಸ.&ಸೇ.ತೆ.ಕ-1,2,3,5&6 ಬೆಂಗಳೂರು, ಸದರಿ ಪ್ರಕಟಣೆಯನ್ನು ಸೂಚನಾ ಪಲಕದಲ್ಲಿ ಪ್ರಕಟಿಸಲು ಕೋರಲಾಗಿದೆ.
3. ವಾಣಿಜ್ಯ ತೆರಿಗೆಗಳ ಉಪ ಆಯುಕ್ತರು(ಸಂಚಲನ), ಬೆಂಗಳೂರು ಇವರಿಗೆ ಸದರಿ ಪ್ರಕಟಣೆಯನ್ನು ಕಛೇರಿಯ ಸೂಚನಾ ಫಲಕದಲ್ಲಿ ಪ್ರಕಟಿಸಲು ಕೋರಲಾಗಿದೆ.
4. ಸಾರ್ವಜನಿಕ ಮಾಹಿತಿಗಾಗಿ ಸೂಚನಾ ಫಲಕಕ್ಕೆ.
5. ವಾಣಿಜ್ಯ ತೆರಿಗೆಗಳ ಉಪ ಆಯುಕ್ತರು, ಗಣಕ ಕೇಂದ್ರ, ಬೆಂಗಳೂರು ಇವರಿಗೆ ಸದರಿ ಟೆಂಡರ್ ಪ್ರಕಟಣೆಯನ್ನು ಇಲಾಖಾ ಅಂತರ್ಜಾಲದಲ್ಲಿ ಪ್ರಕಟಿಸಲು ಕೋರಲಾಗಿದೆ.
6. ಕಛೇರಿಯ ಕಡತಕ್ಕೆ.